**ದಿನಾಂಕ 16-06-2026 ರಂದು ಸಾಕ್ಷಿಯವರಿಗೆ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ :ಶ್ರೀ.ಎಸ್.ಪಿ.ವಿ ವಕೀಲರಿಂದ ವಾದಿ ಪರವಾಗಿ**

ನಾನು ಈ ಕೇಸಿನಲ್ಲಿ ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರ ಸಲ್ಲಿಸಿದ್ದು, ಅದನ್ನು ತಯಾರಿಸಲು ಗೌರವಾನ್ವಿತ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯಗಳು ಸರಿಯಾಗಿರುತ್ತವೆ ಮತ್ತು ಸತ್ಯವಾಗಿರುತ್ತವೆ ಎಂದು ಈ ಮೂಲಕ ಪ್ರಮಾಣಿಸಿಕರಿಸುತ್ತೇನೆ.

ನಾನು ಈಗ ಸರ್ವೆ ನಂ.161/8, 162/4, 247/5, 249/4, 209/3 ಗಳ 2021-22 ರ ಪಹಣಿ ಪತ್ರಿಕೆಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-5 ಎಂದು, ಆಸ್ತಿ ಸಂಖ್ಯೆ 19 ಎ ಕರ ಉತಾರೆ ಹಾಜರಪಡಿಸಿದ್ದು ಅದನ್ನು ನಿಪಿ-6 ಎಂದು, ಆಸ್ತಿ ಸಂಖ್ಯೆ 19/ಬಿ ಉತಾರೆಯನ್ನು ಹಾಜರಪಡಿಸಿದ್ದು ಅದನ್ನು ನಿಪಿ-7 ಎಂದು, ದಿಃ07.11.2007 ರಂದು ಗ್ರಾಮ ಪಂಚಾಯತಿ ಇಂಗಳಗಿಯಲ್ಲಿ ಆದ ಗೊತ್ತುವಳಿಯ ದೃಢೀಕೃತ ನಕಲು ಹಾಜರಪಡಿಸಿದ್ದು ಅದನ್ನು ನಿಪಿ-8 ಎಂದು, ದಿಃ14.12.2009 ರಂದು ಇಂಗಳಗಿ ಗ್ರಾಮ ಪಂಚಾಯತಿಯಲ್ಲಿ ಆದ ಗೊತ್ತುವಳಿ ಹಾಜರಪಡಿಸಿದ್ದು ಅದನ್ನು ನಿಪಿ-9 ಎಂದು, ದಿಃ26.02.2011 ರಂದು ಇಂಗಳಗಿ ಗ್ರಾಮ ಪಂಚಾಯತಿಯಲ್ಲಿ ಆದ ಗೊತ್ತುವಳಿ ಹಾಜರಪಡಿಸಿದ್ದು ಅದನ್ನು ನಿಪಿ-10 ಎಂದು, ಮುಟೇಶನ ಎಂಟ್ರಿ ಸಂಖ್ಯೆ 1580, 232, ಎಚ್.9/2007-08, 169/2010-11, 306/2006-07, ಎಚ್.22/2013-14, ಎಚ್.20/2013-14, 204-2005-2006 ಗಳ ದೃಢೀಕೃತ ನಕಲುಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-11 ರಿಂದ ನಿಪಿ-18 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೋರಿದಂತೆ ಡಿಕ್ರಿ ಆಗಬೇಕಾಗಿ ವಿನಂತಿ.

ಪ್ರತಿವಾದಿ ಪರ ವಕೀಲರು ಹಾಜರ ಇದ್ದು, ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿ ಅದೆ.

ಸಹಿ/-

ಸಾಕ್ಷಿಯ ಸಹಿ

ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಜೆ.ಎಂ.ಎಫ್.ಸಿ., ಮುಧೋಳ